ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2013–14 : ಡಿಸೆಂಬರ್ 26, 2014

## ಪತ್ರಿಕಾ ಪ್ರಕಟಣೆ

## ರಾಜ್ಯ ವಿಮಾನ ನಿಲ್ದಾಣಗಳ ಮೇಲ್ದರ್ಜೆ ಕುರಿತಂತೆ ಡಿಸೆಂಬರ್ 30 ರಂದು ದೆಹಲಿಯಲ್ಲಿ ಮಾತುಕತೆ : ರೋಷನ್ ಬೇಗ್

ಬೆಂಗಳೂರು, ಡಿಸೆಂಬರ್ 26 ( ಕರ್ನಾಟಕ ವಾರ್ತೆ ) :

ರಾಜ್ಯದ ಪ್ರಮುಖ ನಗರಗಳಲ್ಲಿನ ವಿಮಾನ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸುವ ಕುರಿತಂತೆ ಡಿಸೆಂಬರ್ 30 ರಂದು ನವದೆಹಲಿಯಲ್ಲಿ ಕೇಂದ್ರ ವಿಮಾನ ಯಾನ ಸಚಿವ ಶ್ರೀ ಅಶೋಕ್ ಗಜಪತಿ ರಾಜು ಅವರೊಂದಿಗೆ ಮಾತುಕತೆ ನಡೆಸಲಾಗುವುದು ಎಂದು ಮೂಲಸೌಲಭ್ಯ ಅಭಿವೃದ್ಧಿ ಮತ್ತು ಹಜ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವ ಶ್ರೀ ಆರ್. ರೋಷನ್ ಬೇಗ್ ಅವರು ಇಲ್ಲಿ ಇಂದು ತಿಳಿಸಿದರು.

ತಮ್ಮನ್ನು ಭೇಟಿ ಮಾಡಿದ ಮಾಧ್ಯಮದವರೊಂದಿಗೆ ಮಾತನಾಡುತ್ತಿದ್ದ ಅವರು ನಿರ್ಮಾಣ ಹಂತದಲ್ಲಿರುವ ಹಾಗೂ ಪೂರ್ಣಗೊಂಡಿರುವ ವಿಮಾನ ನಿಲ್ದಾಣಗಳಲ್ಲಿ ಮತ್ತಷ್ಟು ಮೂಲಸೌಲಭ್ಯಗಳನ್ನು ಕಲ್ಪಿಸುವ ಬಗ್ಗೆ ಕೇಂದ್ರ ಸಚಿವರೊಂದಿಗೆ ವಿಸ್ತೃತ ಮಾತುಕತೆ ನಡೆಸಲಾಗುವುದು ಎಂದರು.

ಬೆಂಗಳೂರು ಮಾದರಿಯಲ್ಲಿಯೇ ಮೈಸೂರು, ಮಂಗಳೂರು ಹಾಗೂ ಹುಬ್ಬಳ್ಳಿ–ಧಾರವಾಡ ನಗರಗಳಲ್ಲಿ ಮೆಟ್ರೋ ಅಥವಾ ಮಾನೋ ರೈಲು ಸಂಚಾರ ಪ್ರಾರಂಭಿಸಲು ಸಾಧಕ–ಬಾಧಕಗಳನ್ನು ಪರಿಶೀಲಿಸಲು ಮುಖ್ಯಮಂತ್ರಿಯವರು ತಮಗೆ ಸೂಚಿಸಿದ್ದಾರೆ. ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಮೈಸೂರು–ಬೆಂಗಳೂರು–ಚನ್ನೈ ನಡುವೆ ಹೈ ಸ್ಪೀಡ್ ರೈಲು ಸಂಪರ್ಕ ಕಲ್ಪಿಸಿದಲ್ಲಿ, ಈ ಮೂರೂ ನಗರಗಳಲ್ಲಿ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಅನುಕೂಲವಾಗುತ್ತದೆ ಎಂದು ಶ್ರೀ ರೋಷನ್ ಬೇಗ್ ಅವರು ಹೇಳಿದರು.

ದೇವನಹಳ್ಳಿಯ ಕೇಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ 35 ಎಕರೆ ಪ್ರದೇಶದಲ್ಲಿ ದೆಹಲಿಯ ವಿಜ್ಞಾನ ಭವನ ಮಾದರಿಯಲ್ಲಿ ಅಂತಾರಾಷ್ಟ್ರೀಯ ಸಮಾವೇಶ ಕೇಂದ್ರವನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ಅಂತೆಯೇ, ಮಲ್ಟಿಪ್ಲೆಕ್ಸ್, ಥೀಮ್ ಪಾರ್ಕ್ ಹಾಗೂ ಡ್ರೈವ್-ಇನ್ ಥಿಯೇಟರ್ ನಿರ್ಮಾಣ ಮಾಡಲೂ ಚಿಂತಿಸಲಾಗಿದೆ ಎಂದು ವಿವರಿಸಿದರು.

ನಗರದ ಸರ್ಕಾರಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ರಿಯಾಯಿತಿ ದರದಲ್ಲಿ ಮಧ್ಯಾಹ್ನದ ಊಟ ಒದಗಿಸಲು ಇಸ್ಕಾನ್ ಸಂಸ್ಥೆಯ ಜೊತೆಗೆ ಈಗಾಗಲೇ ಮಾತುಕತೆ ನಡೆಸಲಾಗಿದೆ. ಅತಿ ಶೀಘ್ರದಲ್ಲಿಯೇ ಈ ಯೋಜನೆ ಅನುಷ್ಠಾನಕ್ಕೆ ಬರಲಿದೆ ಎಂದು ಪ್ರಶ್ನೆಯೊಂದಕ್ಕೆ ಸಚಿವರು ಉತ್ತರಿಸಿದರು.

ಸನ್ಮಾನ

ಟಿಪ್ಪೂ ಸುಲ್ತಾನ್ ಜಯಂತಿಯನ್ನು ಸರ್ಕಾರದ ವತಿಯಿಂದ ಆಚರಿಸಲು ಮುಖ್ಯಮಂತ್ರಿಯವರ ಮನ ಒಲಿಸಿದ ಶ್ರೀ ರೋಷನ್ ಬೇಗ್ ಅವರನ್ನು ಟಿಪ್ಪೂ ಸುಲ್ತಾನ್ ಅಭಿಮಾನಿಗಳ ಮಹಾ ವೇದಿಕೆಯ ಅಧ್ಯಕ್ಷ ಶ್ರೀ ಟಿಪ್ಪೂ ಖಾಸಿಂ ಅಲಿ ಹಾಗೂ ಸಲಹೆಗಾರ ಶ್ರೀ ತಲಕಾಡು ಚಿಕ್ಕರಂಗೇ ಗೌಡ ನೇತೃತ್ವದ ನಿಯೋಗವು ಸಚಿವರಿಗೆ ಮೈಸೂರು ಪೇಟ ತೊಡಿಸಿ ಹಾಗೂ ಖಡ್ಗ ನೀಡಿ ಸನ್ಮಾನಿಸಿತು. ರಾಜ್ಯ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಶ್ರೀಮತಿ ಬಲ್ಕಿಸ್ ಭಾನು ಅವರೂ ಸೇರಿದಂತೆ ಹಲವು ಗಣ್ಯರು ಈ ಸಂದರ್ಭದಲ್ಲಿ ಹಾಜರಿದ್ದರು.

********

ಡಿ ಪಿ ಎಂ : ಕೆ ಪಿ ಪಿ